ಕರ್ನಾಟಕ ಸರ್ಕಾರ

ಸಮಾಜ ಕಲ್ಯಾಣ ಇಲಾಖೆ

ಸಂಖ್ಯೆ:ಸಕಇ/ಪಪೂತಕೇ/ಎಸ್-4/ಸಿಆ-21 /2019-20 ಆಯುಕ್ತರ ಕಛೇರಿ,
ಐದನೇ ಮಹಡಿ, ಬಹುಮಹಡಿಗಳ ಕಟ್ಟಡ
ಡಾ.ಆರ್.ಅಂಬೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ: 07.01.2020.

ಅಧಿಸೂಚನೆ

ವಿಷಯ: 2019-20ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆಯ ಪರೀಕ್ಷಾ ಪೂರ್ವ ತರಬೇತಿ ಕೇಂದ್ರದ ಮೂಲಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಕಲಬುರಗಿ ನಗರದಲ್ಲಿ 371 (ಜೆ) ವ್ಯಾಪ್ತಿಯಲ್ಲಿ ಬರುವ ಜಿಲ್ಲೆಗಳ ಅಭ್ಯರ್ಥಿಗಳಿಗೆ ಬ್ಯಾಂಕಿಂಗ್ ಸ್ಪರ್ಧಾತ್ಮಕ ಪರೀಕ್ಷೆಗೆ ಪೂರ್ವಭಾವಿ ತರಬೇತಿ ನೀಡುವ ಬಗ್ಗೆ.

ಉಲ್ಲೇಖ: ಸರ್ಕಾದ ಆದೇಶ ಸಂಖ್ಯೆ: ಸಕಇ/358/ಪಕವಿ/2018 ದಿನಾಂಕ: 05.11.2018.

-****-

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2019-20ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ಪರೀಕ್ಷಾ ಪೂರ್ವ ತರಬೇತಿ ಕೇಂದ್ರದ ಮೂಲಕ ಕಲಬುರಗಿ ನಗರದಲ್ಲಿ 371 (ಜೆ) ಹೈದರಾಬಾದ್ ಕರ್ನಾಟಕ ವ್ಯಾಪ್ತಿಯಲ್ಲಿ ಬರುವ ಜಿಲ್ಲೆಗಳ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳನ್ನು ಬ್ಯಾಂಕಿಂಗ್ ಸ್ಪರ್ಧಾತ್ಮಕ ಪರೀಕ್ಷೆಗಳ ಪೂರ್ವಭಾವಿ ತರಬೇತಿಗೆ ಆಯ್ಕೆ ಮಾಡಿ ಉಚಿತವಾಗಿ ತರಬೇತಿಯನ್ನು ನೀಡಲಾಗುವುದು.

ತರಬೇತಿಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಪದವಿಯಲ್ಲಿ ಪಡೆದ ಅಂಕಗಳ ಮೇರಿಟ್ ಆಧಾರದ ಮೇಲೆ ತರಬೇತಿಗೆ ಆಯ್ಕೆ ಮಾಡಲಾಗುತ್ತದೆ. ಸದರಿ ಅಭ್ಯರ್ಥಿಗಳಿಗೆ ಶಿಷ್ಯವೇತನವನ್ನು ಸರ್ಕಾರದಿಂದ ಮಂಜೂರಾದ ದರದಲ್ಲಿ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಪ್ರತಿ ತಿಂಗಳು ವರ್ಗಾಯಿಸಲಾಗುವುದು.

ಬ್ಯಾಂಕಿಂಗ್ ಸ್ಪರ್ಧಾತ್ಮಕ ಪರೀಕ್ಷೆಗಳ ಪೂರ್ವಭಾವಿ ತರಬೇತಿಗೆ ನಿಗಧಿಪಡಿಸಿದ ಶೈಕ್ಷಣಿಕ ವಿದ್ಯಾರ್ಹತೆ, ಅರ್ಜಿ ಸಲ್ಲಿಸಬೇಕಾದ ವೆಬ್‌ಸೈಟ್ ವಿಳಾಸ ಮತ್ತು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದ ವಿವರಗಳು ಈ ಕೆಳಕಂಡತಿದೆ.

ಕ್ರ ಸಂ		ವಿವರಗಳು
01	ಕೋರ್ಸ್‌ನ ವಿವರ	ಬ್ಯಾಂಕಿಂಗ್ ಸ್ಪರ್ಧಾತ್ಮಕ
02	ತರಬೇತಿ ಅವಧಿ	2 ತಿಂಗಳು ಕನಿಷ್ಠ 50 ದಿನಗಳು, ಪ್ರತಿ ದಿನ ಐದು ಗಂಟೆಯಂತೆ 250 ಗಂಟೆಗಳು

downloaded from: www.kpscvaani.com

03	ವಯಸ್ಸು	18 ರಿಂದ 40 ವರ್ಷಗಳು
04	ವಿದ್ಯಾರ್ಹತೆ	• ಪದವಿಯಲ್ಲಿ ಉತ್ತೀರ್ಣರಾಗಿರಬೇಕು. • ಪದವಿಯಲ್ಲಿ ಕನಿಷ್ಠ 50% ಕ್ಕಿಂತ ಹೆಚ್ಚು ಅಂಕಗಳಿಸಿರಬೇಕು.
05	ಅಭ್ಯರ್ಥಿಯ ಸಾಮಾನ್ಯ ಅರ್ಹತೆ	1. ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು. 2. ಕರ್ನಾಟಕ ರಾಜ್ಯದ ಅನುಸೂಚಿತ ಜಾತಿ ಮತ್ತು ಅನುಸೂಚಿತ ವರ್ಗಕ್ಕೆ ಸೇರಿದ ಜಾತಿಪಟ್ಟಿಯಲ್ಲಿರುವ ಜಾತಿಗೆ ಸೇರಿರತಕ್ಕದ್ದು. 3. ಅರ್ಜಿ ಸಲ್ಲಿಸಿರುವ ದಿನಾಂಕದೊಳಗೆ ಆಧಾರ್ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಹೊಂದಿರತಕ್ಕದ್ದು. 4. ದೈಹಿಕ ಅಂಗವಿಕಲ ಮೀಸಲಾತಿಯಡಿ ಅರ್ಜಿ ಸಲ್ಲಿಸುವ ಅಭ್ಯರ್ಥಿ, ನಿಗಧಿತ ಪ್ರಾಧಿಕಾರದಿಂದ ನಿಗದಿಪಡಿಸಲಾದ ಕೊನೆಯ ದಿನಾಂಕದೊಳಗೆ ಅಂಗವಿಕಲ ಪ್ರಮಾಣ ಪತ್ರ ಪಡೆದಿರಬೇಕು.
06	ಷರತ್ತು	ಒಬ್ಬ ಅಭ್ಯರ್ಥಿ ತನ್ನ ಜೀವಿತಾವಧಿಯಲ್ಲಿ ಯಾವುದಾದರೊಂದು ಸ್ಪರ್ಧಾತ್ಮಕ ಪರೀಕ್ಷಾ ತರಬೇತಿಗೆ ಆಯ್ಕೆಯಾಗಲು ಮಾತ್ರ ಆರ್ಹನಿರುತ್ತಾನೆ. ಉದಾ:- ಯುಪಿಎಸ್‌ಸಿ/ಕೆಎಎಸ್ ಅಥವಾ ಗ್ರೂಪ್ ಎ & ಬಿ ವರ್ಗದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಪರೀಕ್ಷಾ ಪೂರ್ವ ತರಬೇತಿ ಕೇಂದ್ರದಿಂದ ಈ ಹಿಂದೆ ಯಾವುದೇ ತರಬೇತಿ ಪಡೆದ ವ್ಯಕ್ತಿ ಪುನ: ಯಾವುದೇ ತರಬೇತಿ ಯನ್ನು ಕೇಂದ್ರದಿಂದ ಪಡೆಯಲು ಅರ್ಜಿ ಸಲ್ಲಿಸಲು ಆರ್ಹರಲ್ಲ.
07	ಮೀಸಲಾತಿ	ದಿವ್ಯಾಂಗ ಅಭ್ಯರ್ಥಿಗಳಿಗೆ ಶೇ.04, ಹಾಸ್ಟಲ್ ವಿದ್ಯಾರ್ಥಿಗಳಿಗೆ ಶೇ.10, ವಸತಿ ಶಾಲೆ ವಿದ್ಯಾರ್ಥಿಗಳಿಗೆ ಶೇ.10, ಮಹಿಳಾ ಅಭ್ಯರ್ಥಿಗಳಿಗೆ ಶೇ.33 ಮತ್ತು ಅಲೆಮಾರಿ ಸಮುದಾಯ/ಸಫಾಯಿ ಕರ್ಮಚಾರಿಗಳ ಮಕ್ಕಳಿಗೆ ಶೇ.5 ರಷ್ಟು ಸ್ಥಾನಗಳು
08	ವಾರ್ಷಿಕ ಆದಾಯ	ಅಭ್ಯರ್ಥಿಯ ಕುಟುಂಬದ ವಾರ್ಷಿಕ ಆದಾಯ ಆದಾಯ ಎಲ್ಲಾ ಮೂಲಗಳಿಂದ ರೂ.05.00 ಲಕ್ಷಗಳ ಒಳಗಿರತಕ್ಕದ್ದು.
09	ವೆಬ್‌ಸೈಟ್ ವಿಳಾಸ	**www.sw.kar.nic.in**
10	ಅರ್ಜಿ ಸಲ್ಲಿಸಲು ಕೊನೆಯ	31 -01-2020 ಸಂಜೆ 5.30 ರವರೆಗೆ

ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು.

ಸೂಚನೆ:

ಆಯ್ಕೆಯಾದ ಅಭ್ಯರ್ಥಿಗಳಿಗೆ ಟೆಂಡರ್‌ನಲ್ಲಿ ಆಯ್ಕೆಯಾದ ಖಾಸಗಿ ಸಂಸ್ಥೆಗಳ ಮೂಲಕ ಕಲಬುರಗಿ ನಗರದಲ್ಲಿ ಉಚಿತವಾಗಿ ತರಬೇತಿಯನ್ನು ನೀಡಲಾಗುವುದು ಹಾಗೂ ತರಬೇತಿ ಅವಧಿಯಲ್ಲಿ ಹೊರ ಜಿಲ್ಲೆಯ ಅಭ್ಯರ್ಥಿಗಳಿಗೆ ರೂ. 5000/- ಹಾಗೂ ಸ್ಥಳಿಯ ಅಭ್ಯರ್ಥಿಗಳಿಗೆ ರೂ. 4000/- ಶಿಷ್ಯವೇತನ ನೀಡಲಾಗುವದು.

downloaded from: www.kpscvaani.com

- ದೈಹಿಕ ಅಂಗವಿಕಲ ಮೀಸಲಾತಿಯಡಿ ಅರ್ಜಿ ಸಲ್ಲಿಸಿದ ಅಭ್ಯರ್ಥಿಯು The right of person with disabilities act 2016, ರನ್ವಯ ಸಕ್ಷಮ ಪ್ರಾಧಿಕಾರದಿಂದ ನಿಗದಿಪಡಿಸಲಾದ ನಮೂನೆಯಲ್ಲಿ ದಿವ್ಯಾಂಗ ಪ್ರಮಾಣ ಪತ್ರವನ್ನು ಕೊನೆಯ ದಿನಾಂಕದೊಳಗೆ ಪಡೆದಿರಬೇಕು.
- ಹಾಸ್ಟೆಲ್ ವಿದ್ಯಾರ್ಥಿಗಳ ಕೋಟಾದಲ್ಲಿ ಆಯ್ಕೆ ಹೊಂದಲು ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಹಾಗೂ ವಸತಿ/ಆಶ್ರಮ ಶಾಲೆಯಲ್ಲಿ ಕನಿಷ್ಠ ಮೂರು ವರ್ಷ ನಿಲಯಾರ್ಥಿಗಳಾಗಿದ್ದ ಬಗ್ಗೆ ಸಂಬಂಧಪಟ್ಟ ವಾರ್ಡನ್/ನಿಲಯ ಮೇಲ್ವಿಚಾರಕರಿಂದ ದೃಢೀಕರಣ ಪತ್ರವನ್ನು ಸಲ್ಲಿಸುವುದು.
- ವಸತಿ ಶಾಲೆ ವಿದ್ಯಾರ್ಥಿಗಳ ಕೋಟಾದಲ್ಲಿ ಆಯ್ಕೆ ಹೊಂದಲು ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಅಲ್ಪ ಸಂಖ್ಯಾತರ ಇಲಾಖೆಯಡಿ ಬರುವ ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ/ಅಂಬೇಡ್ಕರ್ ವಸತಿ ಶಾಲೆಯಲ್ಲಿ ಕನಿಷ್ಟ ೦೮ ವರ್ಷ ವಿದ್ಯಾಭ್ಯಾಸ ಮಾಡಿದ ಅಭ್ಯರ್ಥಿಗಳು ದೃಡೀಕರಣ ಪತ್ರವನ್ನು ನಿಲಯ ಮೇಲ್ವಿಚಾರಕರು ಮತ್ತು ಪ್ರಾಂಶುಪಾಲರಿಂದ ಪಡೆದು ಸಲ್ಲಿಸುವುದು.
- ಅಲೆಮಾರಿ ಸಮುದಾಯ/ಸಫಾಯಿ ಕರ್ಮಚಾರಿಗಳ ಮಕ್ಕಳಿಗೆ ಸಂಬಂಧಿಸಿದಂತೆ ಸರ್ಕಾರ ಗುರುತಿಸಿರುವ ಜಾತಿಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಮಾತ್ರ.
- ಅರ್ಜಿ ಸಲ್ಲಿಸುವಾಗ ನಿಗಧಿತ ನಮೂನೆಗೆ ಯಾವುದೇ ದಾಖಲೆಗಳನ್ನು ಲಗತ್ತಿಸುವ ಅಗತ್ಯವಿರುವುದಿಲ್ಲ. ಆಯ್ಕೆಯಾದ ಅಭ್ಯರ್ಥಿಗಳು ತರಬೇತಿಗೆ ಹಾಜರಾಗುವಾಗ ಈ ಮೇಲಿನ ಎಲ್ಲಾ ದಾಖಲೆಗಳ ಪ್ರತಿಯೊಂದಿಗೆ ಮೂಲ ದಾಖಲೆಗಳನ್ನು ಪರಿಶೀಲನೆಗೆ ನೀಡತಕ್ಕದ್ದು.

Ramya

ಆಯುಕ್ತರು,
ಸಮಾಜ ಕಲ್ಯಾಣ ಇಲಾಖೆ,
ಬೆಂಗಳೂರು.

ಪ್ರತಿಯನ್ನು ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ:

(1) ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು, ರವರಿಗೆ ಗೌರವಪೂರ್ವಕವಾಗಿ ಸಲ್ಲಿಸಲಾಗಿದೆ.
(2) ಮುಖ್ಯ ಆಡಳಿತಾಧಿಕಾರಿಗಳು, ಪರೀಕ್ಷಾ ಪೂರ್ವ ತರಬೇತಿ೮ ಕೇಂದ್ರ, ಬೆಂಗಳೂರು.
(3) ಸೂಚನಾ ಫಲಕ (4) ಪತ್ರಿಕಾ ಪ್ರಕಟಣೆ.

downloaded from: www.kpscvaani.com

downloaded from: www.kpscvaani.com